ಲೋಡ್ ಶೆಡ್ಡಿಂಗ್‌ನ್ನು ಕ್ರಮಬದ್ಧವಾಗಿ ನಿರ್ವಹಿಸಲಾಗುತ್ತಿದೆ ಕೆಲವೊಮ್ಮೆ ಅನಿವಾರ್ಯ ಸಂದರ್ಭಗಳಲ್ಲಿ ಅಗತ್ಯವಿರುವ ಅವಧಿಗೆ ಮಾತ್ರ ಅನಿಯಮಿತ ಲೋಡ್ ಶೆಡ್ಡಿಂಗ್‌ನ್ನು ನಿರ್ವಹಿಸುವುದು ಸದ್ಯದ ಪರಿಸ್ಥಿತಿಯಲ್ಲಿ ಅನಿವಾರ್ಯವಾಗಿರುತ್ತದೆ ಇದನ್ನು ಹೊರತುಪಡಿಸಿ, ಉಳಿದ ವೇಳೆಗಳಲ್ಲಿ ನಿರಂತರ ವಿದ್ಯುತ್‌ನ್ನು ಸರಬರಾಜು ಮಾಡಲಾಗುತ್ತಿದೆ

ಆ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಪ್ರತಿ ದಿನ 9 ಗಂಟೆಗಳ ಅವಧಿಗೆ ಮೂರು ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಮಾಡುತ್ತಿರುವುದರಿಂದ, ಈ ಸಮಯದಲ್ಲಿ ವಿದ್ಯುತ್ ಬಳಸಿ ನೀರು ಸರಬರಾಜು ಸ್ಥಾವರಗಳು ನೀರು ಸರಬರಾಜು ಮಾಡಬಹುದಾಗಿರುತ್ತದೆ ಅಲ್ಲದೇ, ನಗರ/ಪಟ್ಟಣ ಪ್ರದೇಶಗಳಲ್ಲಿ ಮುಖ್ಯ ನೀರು ಸರಬರಾಜು ಸ್ಥಾವರಗಳಿಗೆ ಸಾಮಾನ್ಯವಾಗಿ ಪ್ರತ್ಯೇಕ ಫೀಡರ್‌ಗಳ ಮೂಲಕ ವಿದ್ಯುತ್ ಸರಬರಾಜು ಮಾಡುತ್ತಿರುವುದರಿಂದ, ವಿದ್ಯುತ್ ಸರಬರಾಜಿನಲ್ಲಿ ಉಂಟಾಗಬಹುದಾದ ಅಡಚಣೆಗಳನ್ನು ಕನಿಷ್ಠಗೊಳಿಸಲಾಗುತ್ತಿದೆ

1494 (2072) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) – ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಸರ್ಕಾರವು ಪ್ರವಾಸಿ ಕೇಂದ್ರಗಳೆಂದು ಘೋಷಿಸಿರುವ ಸ್ಥಳಗಳು ಯಾವುವು,

ಆ) ಈ ಪ್ರಸಿದ್ಧ ಸ್ಥಳಗಳನ್ನು ಪ್ರವಾಸಿಗರ ಆಕರ್ಷಣೆಗೆ ಒಳಪಡಿಸಲು ಹಾಗೂ ದೇಶ ವಿದೇಶಗಳಿಗೆ ಪರಿಚಯಿಸಲು ಹಾಗೂ ಸೂಕ್ತ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳೇನು,

ಇ) ಬೆಳ್ತಂಗಡಿ ತಾಲ್ಲೂಕಿನ ಗುರುವಾಯ ಕೆರೆ ಎಂಬ ಪ್ರದೇಶದಲ್ಲಿ ಒಂದು ಐತಿಹಾಸಿಕ ಹಾಗೂ ಪ್ರಾಚೀನ ಪರಂಪರೆಯ ದೊಡ್ಡ ಕೆರೆಯೊಂದಿದ್ದು ಇದನ್ನು ಇಲಾಖೆಯು ಸ್ವಾಧೀನಗೊಳಿಸಿಕೊಂಡು ಪ್ರಕೃತಿ ವೀಕ್ಷಣಾ ಕೆರೆಯನ್ನಾಗಿ ಅಭಿವೃದ್ಧಿಪಡಿಸಿ ಪ್ರವಾಸಿ ಕೇಂದ್ರವನ್ನಾಗಿ ಮಾಡಲು ಸರ್ಕಾರವು ಸಕಾಲಿಕ ಕ್ರಮಗಳನ್ನು ಕೈಗೊಳ್ಳುವರೆ?

ಶ್ರೀ ಬಿ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಬೆಳ್ತಂಗಡಿ ತಾಲ್ಲೂಕಿಗೆ ಸೇರಿದ ಈ ಕೆಳಕಂಡ ಸ್ಥಳಗಳನ್ನು ಪ್ರವಾಸಿ ಕೇಂದ್ರಗಳೆಂದು ಗುರುತಿಸಲಾಗಿದೆ ,–

1 ಧರ್ಮಸ್ಥಳ

2 ವೇಣೂರು

3 ಸಿಸಿಲ

4 ಜಮಾಲಾಬಾದ್

ಆ) ದಕ್ಷಿಣ ಕನ್ನಡ ಜಿಲ್ಲೆಯ ಪ್ರವಾಸಿ ಮಾಹಿತಿ ಮಡಿಕೆ ಮೂಲಕ ಸದರಿ ಸ್ಥಳಗಳ ಬಗ್ಗೆ ಮಾಹಿತಿಯನ್ನು ಪ್ರವಾಸಿಗರಿಗೆ ಒದಗಿಸಲಾಗುತ್ತಿದೆ ಧರ್ಮಸ್ಥಳ, ವೇಣುರುಗಳನ್ನು ಜೈನ್ ಸರ್ಕ್ಯೂಟ್ ಎಂಬ ಪ್ರತ್ಯೇಕ ಮಾಹಿತಿ ಮಡಿಕೆಯಲ್ಲೂ ಪ್ರಚಾರ ಪಡಿಸಲಾಗಿದೆ

ವೇಣೂರು, ಜಮಾಲಾಬಾದ್‌ಗಳಲ್ಲಿ ಸೂಕ್ತ ನಿವೇಶನ ದೊರೆತಲ್ಲಿ ಶೌಚಾಲಯ ಹಾಗೂ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದು

ಇ) ಗುರುವಾಯನ ಕೆರೆಯನ್ನು ನೇರವಾಗಿ ಇಲಾಖೆಯು ಸ್ವಾಧೀನಪಡಿಸಿಕೊಳ್ಳಲು ಬರುವುದಿಲ್ಲ ಆದರೆ ಈ ಕೆರೆಯಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಸೌಲಭ್ಯ ಕಲ್ಪಿಸಲು ಜಿಲ್ಲಾಡಳಿತವು ಒಪ್ಪಿ ಮುಂದೆ ಬಂದಲ್ಲಿ ಇಲಾಖೆಯು ಸಹಕಾರವನ್ನು ನೀಡುತ್ತದೆ

1495 (2073) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) – ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಬೆಳ್ತಂಗಡಿ ಹಾಗೂ ಉಜಿರೆ ಪ್ರದೇಶಕ್ಕೆ ಅಗತ್ಯವುಳ್ಳ ಒಳಚರಂಡಿ ಹಾಗೂ ಶಾಶ್ವತ ಕುಡಿಯುವ ನೀರಿನ ಯೋಜನೆಯನ್ನು ಸರ್ಕಾರವು ರೂಪಿಸಿದೆಯೇ,

ಆ) ಹಾಗಿದ್ದಲ್ಲಿ, ಈ ಯೋಜನೆಯನ್ನು ಜಾರಿಗೆ ತರಲು ಸರ್ಕಾರದ ಕ್ರಿಯಾ ಯೋಜನೆಗಳೇನು?